# ಕರ್ನಾಟಕ ವಿಧಾನ ಪರಿಷತ್ತು

**1.** ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 214
**2.** ಮಾನ್ಯ ಸದಸ್ಯರ ಹೆಸರು : ಶ್ರೀ ಭೀಮರಾಜ್ ಬಸವರಾಜ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
**3.** ಉತ್ತರಿಸಬೇಕಾದ ದಿನಾಂಕ : 10.12.2024
**4.** ಉತ್ತರಿಸುವ ಸಚಿವರು : ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಬೀದರ್ ಜಿಲ್ಲೆಯ ಬಿ.ಎಸ್.ಎಸ್.ಕೆ ಸಕ್ಕರೆ ಕಾರ್ಖಾನೆ ಸ್ಥಗಿತಗೊಂಡಿರುವುದರಿಂದ ಕಬ್ಬು ಬೆಳೆದ ರೈತರು ಸಾಕಷ್ಟು ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ ಈ ಕಾರ್ಖಾನೆ ಪ್ರಾರಂಭಿಸಲು ಕೈಗೊಂಡ ಕ್ರಮವೇನು; (ಮಾಹಿತಿ ನೀಡುವುದು) | ಬೀದರ್ ಸಹಕಾರ ಸಕ್ಕರೆ ಕಾರ್ಖಾನೆಯ 2021-22ನೇ ಸಾಲಿನಿಂದ ಸ್ಥಗಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.<br>ಆರ್ಥಿಕ ಸಂಕಷ್ಟದಲ್ಲಿರುವ ಬೀದರ್ ಸಹಕಾರ ಸಕ್ಕರೆ ಕಾರ್ಖಾನೆಯನ್ನು Lease Rehabilitate Operate Transfer (ಎಲ್.ಆರ್.ಓ.ಟಿ) ಆಧಾರದ ಮೇಲೆ ದೀರ್ಘಾವಧಿಗೆ ಖಾಸಗಿಯವರಿಗೆ ಗುತ್ತಿಗೆ ನೀಡುವ ಮೂಲಕ ಪುನಶ್ಚೇತನಗೊಳಿಸುವ ಸಂಬಂಧ ಸರ್ಕಾರದ ಆದೇಶ ಸಂಖ್ಯೆ: ಸಿಐ 107 ಸಿಓಎಫ್ 2022 (ಭಾಗ-3) ದಿನಾಂಕ: 10.01.2023 ರಲ್ಲಿ ಅನುಮತಿಸಲಾಗಿತ್ತು. ಅದರಂತೆ ಬೀದರ್ ಸಹಕಾರ ಸಕ್ಕರೆ ಕಾರ್ಖಾನೆಯ ವತಿಯಿಂದ ಹೊರಡಿಸಲಾಗಿದ್ದ ಟೆಂಡರ್ ಪ್ರಕಟಣೆಯನ್ವಯ ದಿನಾಂಕ:09.03.2023 ರಂದು ಆಸಕ್ತ ಬಿಡ್ಡುದಾರರೊಂದಿಗೆ ಪ್ರಿ-ಬಿಡ್ ಸಭೆಯನ್ನು ನಡೆಸಲಾಗಿರುತ್ತದೆ. ಬೀದರ್ ಸಹಕಾರ ಸಕ್ಕರೆ ಕಾರ್ಖಾನೆಯ ಸಾಲಗಳನ್ನು ಓ.ಟಿ.ಎಸ್ ಮೂಲಕ ತೀರುವಳಿ ಮಾಡುವ ಅವಕಾಶವನ್ನು ಸೇರಿದಂತೆ ಟೆಂಡರ್ ಷರತ್ತು ಮತ್ತು ನಿಬಂಧನೆಗಳಲ್ಲಿ ಕೆಲವು ತಿದ್ದುಪಡಿ / ಬದಲಾವಣೆಗಳನ್ನು ಮಾಡಲು ಪ್ರಿ-ಬಿಡ್ ಸಭೆಯಲ್ಲಿ ಭಾಗವಹಿಸಿದ್ದ ಆಸಕ್ತ ಬಿಡ್ಡುದಾರರು ಕೋರಿದ್ದರು.<br>ಅದರಂತೆ, ಬೀದರ್ ಸಹಕಾರ ಸಕ್ಕರೆ ಕಾರ್ಖಾನೆಗೆ ಸಾಲ ನೀಡಿರುವ ಬ್ಯಾಂಕುಗಳು / ಹಣಕಾಸು ಸಂಸ್ಥೆಗಳೊಂದಿಗೆ ಸಭೆಯನ್ನು ಜರುಗಿಸಿ ಸಾಲ ನೀಡಿರುವ ಬ್ಯಾಂಕುಗಳು / ಹಣಕಾಸು ಸಂಸ್ಥೆಗಳು ಅಂತಿಮವಾಗಿ ಎಷ್ಟು ಓ.ಟಿ.ಎಸ್ ಮೊತ್ತಕ್ಕೆ ಒಪ್ಪುತ್ತವೆ ಎಂಬ ಬಗ್ಗೆ ಅಭಿಪ್ರಾಯ / ಸಹಮತಿಯನ್ನು ಪಡೆದು ಟೆಂಡರ್ ಡಾಕ್ಯುಮೆಂಟಿನ ಷರತ್ತು ಮತ್ತು ನಿಬಂಧನೆಗಳನ್ನು ಬದಲಾವಣೆ / ತಿದ್ದುಪಡಿ ಮಾಡುವ ಕುರಿತು ಪರಿಷ್ಕೃತ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸುವಂತೆ ಸರ್ಕಾರದ ಪತ್ರ ಸಂಖ್ಯೆ:ಸಿಐ 107 ಸಿಓಎಫ್ 2022 (ಭಾಗ-3), ದಿನಾಂಕ:05.09.2023, 12.03.2024, 28.06.2024 ಮತ್ತು 24.09.2024 ಪತ್ರಗಳಲ್ಲಿ ಆಯುಕ್ತರು ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶಕರಿಗೆ ಮತ್ತು ವ್ಯವಸ್ಥಾಪಕ ನಿರ್ದೇಶಕರು, ಬೀದರ್ ಸಹಕಾರ ಸಕ್ಕರೆ ಕಾರ್ಖಾನೆ., ಹಳ್ಳಿಖೇಡ್, ಹುಮನಾಬಾದ್ ತಾಲ್ಲೂಕು, ಬೀದರ್ ಜಿಲ್ಲೆ ಇವರಿಗೆ ತಿಳಿಸಲಾಗಿತ್ತು.<br>ವ್ಯವಸ್ಥಾಪಕ ನಿರ್ದೇಶಕರು, ಬೀದರ್ ಸಹಕಾರ ಸಕ್ಕರೆ ಕಾರ್ಖಾನೆ ಇವರು, ಏಕತೀರುವಳಿ ಯೋಜನೆ ಅಡಿಯಲ್ಲಿ ಸಾಲದ ಮೇಲಿನ ಬಡ್ಡಿಯನ್ನು ಮನ್ನಾ ಮಾಡುವಂತೆ ಬೀದರ್ ಡಿ.ಸಿ.ಸಿ ಬ್ಯಾಂಕ್ ನಿ., ಇವರನ್ನು ಕೋರಿದ್ದು, ಬೀದರ್ ಡಿ.ಸಿ.ಸಿ ಬ್ಯಾಂಕ್‌ನಿಂದ ಇದುವರೆವಿಗೂ ಯಾವುದೇ ಉತ್ತರ ಬಂದಿರುವುದಿಲ್ಲ. |
| (ಆ) | ಕೆ.ಕೆ.ಆರ್.ಡಿ.ಬಿ ಅನುದಾನ ಬಳಕೆ ಮಾಡಿಕೊಂಡು ಕಾರ್ಖಾನೆ ಪ್ರಾರಂಭಿಸಲು ಸರ್ಕಾರಕ್ಕೆ ಏನು ತೊಂದರೆ ಇದೆ; | ಬೀದರ್ ಸಹಕಾರ ಸಕ್ಕರೆ ಕಾರ್ಖಾನೆಯು ಚುನಾಯಿತ ಆಡಳಿತ ಮಂಡಳಿಯನ್ನು ಹೊಂದಿದ್ದು, ಕಾರ್ಖಾನೆಯ ಕಾರ್ಯನಿರ್ವಹಣೆಗೆ ಅಗತ್ಯವಾದ ಸಂಪನ್ಮೂಲವನ್ನು ಕ್ರೋಢೀಕರಿಸುವುದು ಆಡಳಿತ ಮಂಡಳಿಯ ಜವಾಬ್ದಾರಿಯಾಗಿರುತ್ತದೆ. ಕಬ್ಬು ಬೆಳೆಗಾರ ರೈತರ ಮತ್ತು ಕಾರ್ಮಿಕರ ಹಿತದೃಷ್ಟಿಯಿಂದ ಆರ್ಥಿಕ ಸಂಕಷ್ಟದಿಂದ ಹಾಗೂ ಇತರೆ |

| | | |
|---|---|---|
| | | ಆಡಳಿತಾತ್ಮಕ ಕಾರಣಗಳಿಂದ ಸ್ಥಗಿತಗೊಂಡಿರುವ ಸಹಕಾರ ಸಕ್ಕರೆ ಕಾರ್ಖಾನೆಗಳನ್ನು ಧೀರ್ಘಾವಧಿಯ ಮೇಲೆ ಖಾಸಗಿಯವರಿಗೆ ಗುತ್ತಿಗೆ ನೀಡುವುದರ ಮೂಲಕ ಪುನಶ್ಚೇತನಗೊಳಿಸುವುದು ಸರ್ಕಾರದ ನೀತಿಯಾಗಿರುತ್ತದೆ. ಅದರಂತೆ, ಇದುವರೆವಿಗೂ 10 ಸಹಕಾರ ಸಕ್ಕರೆ ಕಾರ್ಖಾನೆಗಳನ್ನು ಖಾಸಗಿಯವರಿಗೆ ಗುತ್ತಿಗೆ ನೀಡುವುದರ ಮೂಲಕ ಪುನಶ್ಚೇತನಗೊಳಿಸಲಾಗಿದೆ. |
| (ಇ) | ಕಾರ್ಖಾನೆಯನ್ನು ಯಾವಾಗ ಪ್ರಾರಂಭ ಮಾಡಲಾಗುವುದು? (ಮಾಹಿತಿ ನೀಡುವುದು) | ಬೀದರ ಸಹಕಾರ ಸಕ್ಕರೆ ಕಾರ್ಖಾನೆಯನ್ನು ಖಾಸಗಿಯವರಿಗೆ ಗುತ್ತಿಗೆ ನೀಡುವ ಸಂಬಂಧ ಸೂಕ್ತ ತೀರ್ಮಾನ ಕೈಗೊಳ್ಳಬೇಕಾಗಿರುವುದರಿಂದ, ಬೀದರ ಸಹಕಾರ ಸಕ್ಕರೆ ಕಾರ್ಖಾನೆಗೆ ಸಾಲ ನೀಡಿರುವ ಬ್ಯಾಂಕ್ ಮತ್ತು ಹಣಕಾಸು ಸಂಸ್ಥೆಗಳ ಸಭೆಯನ್ನು ಜರುಗಿಸಿ, ಸಾಲ ನೀಡಿರುವ ಬ್ಯಾಂಕ್‌ಗಳು ಅಂತಿಮವಾಗಿ ಎಷ್ಟು ಓ.ಟಿ.ಎಸ್ ಮೊತ್ತಕ್ಕೆ ಒಪ್ಪುತ್ತವೆ ಎಂಬ ಬಗ್ಗೆ ಅಭಿಪ್ರಾಯ/ಸಹಮತಿಯನ್ನು ಪಡೆದು, ಟೆಂಡರ್ ಡಾಕ್ಯೂಮೆಂಟಿನ ಷರತ್ತುಗಳ ಬದಲಾವಣೆ/ತಿದ್ದುಪಡಿ ಕುರಿತು ಪರಿಷ್ಕೃತ ಪ್ರಸ್ತಾವನೆಯನ್ನು ಸಿದ್ದಪಡಿಸಿ ಸರ್ಕಾರಕ್ಕೆ ಕಳುಹಿಸಿ ಕೊಡುವಂತೆ ಸರ್ಕಾರದ ಪತ್ರ ಸಂಖ್ಯೆ:ಸಿಐ 107 ಸಿಓಎಫ್ 2022 (ಭಾಗ-3), ದಿನಾಂಕ:04.12.2024ರ ಪತ್ರದಲ್ಲಿ ಆಯುಕ್ತರು ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶಕರಿಗೆ ಮತ್ತು ವ್ಯವಸ್ಥಾಪಕ ನಿರ್ದೇಶಕರು, ಬೀದರ್ ಸಹಕಾರ ಸಕ್ಕರೆ ಕಾರ್ಖಾನೆ., ಹಳ್ಳಿಖೇಡ್, ಹುಮನಾಬಾದ್ ತಾಲ್ಲೂಕು, ಬೀದರ್ ಜಿಲ್ಲೆ ಇವರಿಗೆ ತಿಳಿಸಲಾಗಿದೆ.<br><br>ಪರಿಷ್ಕೃತ ಪ್ರಸ್ತಾವನೆಯು ಸ್ವೀಕೃತವಾದ ನಂತರ ಈ ಕಾರ್ಖಾನೆಯನ್ನು ದೀರ್ಘಾವಧಿಗೆ ಖಾಸಗಿಯವರಿಗೆ ಗುತ್ತಿಗೆ ನೀಡುವ ಸಂಬಂಧ ಟೆಂಡರ್ ಡಾಕ್ಯೂಮೆಂಟಿನ ಷರತ್ತುಗಳ ಬದಲಾವಣೆ /ತಿದ್ದುಪಡಿ ಕುರಿತು ಸೂಕ್ತ ತೀರ್ಮಾನ ಕೈಗೊಂಡು ಟೆಂಡರ್ ಪ್ರಕಟಣೆಯನ್ನು ಹೊರಡಿಸಲು ನಿಯಮಾನುಸಾರ ಕ್ರಮವಹಿಸಲಾಗುವುದು. |

**ಸಂಖ್ಯೆ :** ಸಿಐ 359 ಸಿಓಎಫ್ 2024

(ಶಿವಾನಂದ ಎಸ್ ಪಾಟೀಲ)
ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ
ಹಾಗೂ ಕೃಷಿ ಮಾರುಕಟ್ಟೆ ಸಚಿವರು